ಕರ್ನಾಟಕ ವಿಧಾನ ಪರಿಷತ್ತು

1. ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 1509
2. ಸದಸ್ಯರ ಹೆಸರು : ಶ್ರೀ ಎಂ.ಎ. ಗೋಪಾಲಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)
3. ಉತ್ತರಿಸಬೇಕಾದ ದಿನಾಂಕ : 19.03.2020
4. ಉತ್ತರಿಸುವ ಸಚಿವರು : ಜಲಸಂಪನ್ಮೂಲ ಸಚಿವರು

ಕ್ರ.ಸಂ.	ಪ್ರಶ್ನೆಗಳು	ಉತ್ತರಗಳು
ಅ)	ಬಯಲುಸೀಮೆ ಜಿಲ್ಲೆಗಳಿಗೆ ಕುಡಿಯುವ ನೀರನ್ನು ಒದಗಿಸುವ ಎತ್ತಿನಹೊಳೆ ಯೋಜನೆಗಾಗಿ ಹಾಸನ ಜಿಲ್ಲೆಯ ಎಷ್ಟು ಗ್ರಾಮಗಳಲ್ಲಿ ಎಷ್ಟು ಎಕರೆ ಜಮೀನನ್ನು ಭೂಸ್ವಾಧೀನ ಮಾಡಿಕೊಳ್ಳಲಾಗಿದೆ; ಜಮೀನು ಕಳೆದುಕೊಂಡಿರುವ ಸಂತ್ರಸ್ಥರ ಹೆಸರು ಮತ್ತು ಊರಿನ ವಿವರಗಳೊಂದಿಗೆ ತಾಲ್ಲೂಕುವಾರು ಮಾಹಿತಿ ನೀಡುವುದು;	ಎತ್ತಿನಹೊಳೆ ಸಮಗ್ರ ಕುಡಿಯುವ ನೀರಿನ ಯೋಜನೆಯಲ್ಲಿ ಹಾಸನ ಜಿಲ್ಲೆಯಲ್ಲಿನ ಭೂಸ್ವಾಧೀನ ಪ್ರಕ್ರಿಯೆ ಪ್ರಗತಿಯಲ್ಲಿದೆ. ಭೂಸ್ವಾಧೀನ ಪ್ರಕ್ರಿಯೆ ಅಂತಿಮಗೊಂಡ ನಂತರ ಭೂ ಪರಿಹಾರ ಪಾವತಿಸಲು ಕ್ರಮ ವಹಿಸಲಾಗುವುದು.
ಆ)	ಎತ್ತಿನಹೊಳೆ ಯೋಜನೆಗಾಗಿ ಹಾಸನ ಜಿಲ್ಲೆಯಲ್ಲಿ ಭೂಮಿ ಕಳೆದುಕೊಂಡ ರೈತರಿಗೆ ಸರ್ಕಾರದಿಂದ ಪರಿಹಾರ ನೀಡಲು ಎಕರೆವಾರು ನಿಗಧಿಪಡಿಸಿರುವ ಬೆಲೆ ಎಷ್ಟು; ಇದಕ್ಕಾಗಿ ಸರ್ಕಾರದಿಂದ ಬಿಡುಗಡೆಯಾಗಿರುವ ಅನುದಾನವೆಷ್ಟು; ಮತ್ತು ಇದರಲ್ಲಿ ಪರಿಹಾರ ನೀಡಿರುವ ಮೊತ್ತವೆಷ್ಟು;	
ಇ)	ಎತ್ತಿನಹೊಳೆ ಯೋಜನೆಯಡಿ ಇದುವರೆವಿಗೂ ಪರಿಹಾರ ಪಡೆದಿರುವ ಭೂ ಸಂತ್ರಸ್ಥರ ಹೆಸರು, ಪರಿಹಾರದ ಮೊತ್ತ ಮತ್ತು ಊರಿನ ವಿವರಗಳನ್ನು ನೀಡುವುದು;	
ಈ)	ಎತ್ತಿನಹೊಳೆ ಯೋಜನೆಯಡಿ ಇದುವರೆವಿಗೂ ಪರಿಹಾರ ಪಡೆಯದ ಭೂ ಸಂತ್ರಸ್ಥರ ಹೆಸರು, ಪರಿಹಾರದ ಮೊತ್ತ ಮತ್ತು ಊರಿನ ವಿವರಗಳನ್ನು ನೀಡುವುದು; ಪರಿಹಾರ ನೀಡಲು ವಿಳಂಬವಾಗಿರುವುದಕ್ಕೆ ಕಾರಣಗಳೇನು?	

ಸಂಖ್ಯೆ: ಜಸಂಇ 34 ಡಬ್ಲ್ಯೂಎಲ್ಎ 2020

(ರಮೇಶ್ ಲ. ಜಾರಕಿಹೊಳಿ)
ಜಲಸಂಪನ್ಮೂಲ ಸಚಿವರು
(ಬೃಹತ್ ಮತ್ತು ಮಧ್ಯಮ ನೀರಾವರಿ)